ಪ್ರಸ್ತಾವನೆ ಹೀಗಿದೆ:

2011ನೇ ಸಾಲಿನ ಕರ್ನಾಟಕ ಪೌರ ನಿಗಮಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯ ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಸಚಿವರು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಲಿ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಪೌರ ನಿಗಮಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ. **ಅನುಬಂಧ–6**

(ಇ) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ (ತಿದ್ದುಪಡಿ) ವಿಧೇಯಕ, 2011

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಲಿ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ:

2011ನೇ ಸಾಲಿನ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ (ತಿದ್ದುಪಡಿ ವಿಧೇಯಕವನ್ನು ಮಂಡಿಸಲು ಸಭೆಯ ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಸಚಿವರು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಲಿ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

ಅನುಬಂಧ–7

II. ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಪರ್ಯಾಲೋಚನಾ ಪ್ರಸ್ತಾವ

(ಅ) ಕರ್ನಾಟಕ ಮೂಲಗೇಣಿ ಅಥವಾ ಒಳಮೂಲಗೇಣಿ ಗೇಣಿದಾರರಿಗೆ ಮಾಲೀಕತ್ವವನ್ನು ಪ್ರಧಾನ ಮಾಡುವ ವಿಧೇಯಕ, 2011

ಡಾ: ವಿ. ಎಸ್. ಆಚಾರ್ಯ (ಉನ್ನತ ಶಿಕ್ಷಣ ಸಚಿವರು): (ಕಂದಾಯ ಸಚಿವರ ಪರವಾಗಿ); ರಾಜ್ಯದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಮೂಲ ಗೇಣಿ ಎಂದು ಹೇಳುವಂಥ ಗೇಣಿ ಪದ್ಧತಿ ಚಾರಿತ್ರಿಕ ಕಾರಣದಿಂದ ಇನ್ನೂ ಚಾಲ್ತಿಯಲ್ಲಿದೆ. ಇದರಂತೆ ಆ ಮೂಲ ಗೇಣಿದಾರನಿಗೆ ಆ ಜಾಗದ marketable title ಅವನಿಗಿದೆ. ಆದರೆ, ವರ್ಷಕ್ಕೆ ಒಂದಿಷ್ಟು 10 ರೂಪಾಯಿಗಳೋ 15 ರೂಪಾಯಿಗಳೋ ಮೂಲದಾರನಿಗೆ ಅಂದರೆ ಅದರ